ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯ ಬಗ್ಗೆ

ಶ್ರೀ ಕಾಂತರಾಜು (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

193(294) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿಯಲ್ಲಿ ಖಾಸಗಿ ವಿಮಾ ಸಂಸ್ಥೆಗಳು ತಮ್ಮ ಅನುಕೂಲಕ್ಕೆ ತಕ್ಕಂತೆ ನಿಯಮಗಳನ್ನು ರೂಪಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ನಿಯಮಾವಳಿಗಳಿಂದ ರೈತರ ಹಣವನ್ನು ಪಾವತಿಸಿದ್ದರೂ ಸಹ ಅವರಿಗೆ ವಿಮಾ ಸೌಲಭ್ಯದ ಮೊತ್ತವು ಪಾವತಿಯಾಗದೆ ಸಂಕಷ್ಟದಲ್ಲಿರುವುದು ನಿಜವೇ;

(ಇ) ಕಳೆದ 2 ವರ್ಷಗಳಲ್ಲಿ ತುಮಕೂರು ಜಿಲ್ಲೆಯಲ್ಲಿ ಫಸಲ್ ಭೀಮಾ ಯೋಜನೆಯಲ್ಲಿ ಮುಂಗಾರು ಮತ್ತು ಹಿಂಗಾರು ಬೆಳೆಗಳಿಗೆ ರೈತರು ತುಂಬಿರುವ ವಿಮಾಕಂತಿನ ಹಣವೆಷ್ಟು;

(ಈ) ಕಳೆದ 2 ವರ್ಷಗಳಲ್ಲಿ ಬೆಳೆ ನಷ್ಟ ಪರಿಹಾರಕ್ಕೆ ವಿಮಾಯೋಜನೆಯು ರೈತರಿಗೆ ಇಲ್ಲಿಯ ತನಕ ಎಷ್ಟು ಹಣವನ್ನು ಪಾವತಿಸಿದೆ;

(ಉ) ಕಳೆದ 2 ವರ್ಷದ ಅವಧಿಯ ಫಸಲ್ ಭೀಮಾ ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು? (ತುಮಕೂರು ಜಿಲ್ಲೆ, ತಾಲ್ಲೂಕು, ಹೋಬಳಿವಾರು ವಿವರ ನೀಡುವುದು)